**All India Radio: Bangalore**
**National Bulletin In Kannada**
**07.10.2026  1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**07.10.2026  1.10 p.m.**

**<><><><>**

ಮುಖ್ಯಾಂಶಗಳು

1. ಜನರ ವಿಶ್ವಾಸ ಮತ್ತು ಪಕ್ಷದ ಕಾರ್ಯಕರ್ತರ ಸಮರ್ಪಣೆಯೇ ತಮ್ಮ ಶಕ್ತಿಯ ಮೂಲ- ಪ್ರಧಾನಿ ನರೇಂದ್ರ ಮೋದಿ
2. ಮೂರುವರೆ ವರ್ಷದ ಬಳಿಕ ರೆಪೊ ದರದಲ್ಲಿ ಹೆಚ್ಚಳ; ಶೇಕಡಾ ೫.೫ಕ್ಕೆ ನಿಗದಿಪಡಿಸಿದ ಆರ್‌ಬಿಐ
3. ವಿಶ್ವಸಂಸ್ಥೆಯಲ್ಲಿ ಜಮ್ಮು - ಕಾಶ್ಮೀರ ಕುರಿತ ಇಸ್ಲಾಮಿಕ್ ಸಹಕಾರ ಸಂಘಟನೆ ಹೇಳಿಕೆ ತಿರಸ್ಕರಿಸಿದ ಭಾರತ
4. ಭಾರತ ಮಹಿಳಾ ಕ್ರಿಕೆಟ್ ತಂಡದ ನೂತನ ನಾಯಕಿಯಾಗಿ ಸ್ಮೃತಿ ಮಂದಾನ ನೇಮಕ; ಜಿಂಬಾಬ್ವೆ ವಿರುದ್ಧದ ಸರಣಿಗೆ ತಂಡ ಪ್ರಕಟ

<><><><>

ಜನರ ವಿಶ್ವಾಸ ಮತ್ತು ಕೋಟ್ಯಂತರ ಪಕ್ಷದ ಕಾರ್ಯಕರ್ತರ ಸಮರ್ಪಣೆಯೇ ತಮ್ಮ ಶಕ್ತಿಯ ಪ್ರಮುಖ ಮೂಲಗಳಾಗಿವೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ನಡೆದ ವಿಕಸಿತ ಭಾರತ ಸಂಕಲ್ಪ ಸಭೆಯಲ್ಲಿ ಮಾತನಾಡಿದ ಅವರು, ದೇಶದ ೧೪೦ ಕೋಟಿ ಜನರಿಗಾಗಿ ಹಾಗೂ ಜನರ ಸೇವೆಯನ್ನು ಸಮರ್ಪಣೆಯಿಂದ ಮುಂದುವರಿಸಲು ಹೆಚ್ಚಿನ ಶಕ್ತಿ ಮತ್ತು ಸಾಮರ್ಥ್ಯ ನೀಡುವಂತೆ ದೇವರಲ್ಲಿ ಪ್ರಾರ್ಥಿಸಿರುವುದಾಗಿ ತಿಳಿಸಿದರು. ಕಳೆದ ೨೫ ವರ್ಷಗಳಲ್ಲಿ ಗಳಿಸಿದ ಜನರ ವಿಶ್ವಾಸ ಮತ್ತು ಅನುಭವ ತಮ್ಮ ಪಾಲಿಗೆ ಬಹುದೊಡ್ಡ ಆಸ್ತಿಯಾಗಿದೆ. ಪ್ರಸ್ತುತ ಕೇಂದ್ರ ಸರ್ಕಾರದ ನೀತಿಗಳು, ಎಲ್ಲಾ ನಾಗರಿಕರ ಸವಾಲುಗಳಿಗೆ ಪರಿಹಾರ ಕಂಡುಕೊಳ್ಳುವುದರ ಮೇಲೆ ಕೇಂದ್ರೀಕರಿಸಿವೆ ಎಂದರು. ಈ ಸಂದರ್ಭದಲ್ಲಿ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್, ಪ್ರಧಾನಿ ನರೇಂದ್ರ ಮೋದಿ ಅವರು ಸಾರ್ವಜನಿಕ ಸೇವೆಯನ್ನೇ ಜೀವನದ ಧ್ಯೇಯವನ್ನಾಗಿಸಿಕೊಂಡಿದ್ದಾರೆ ಎಂದು ಹೇಳಿದರು.

ಬಡವರು, ಯುವಜನರು, ರೈತರು ಮತ್ತು ಮಹಿಳೆಯರನ್ನು ಕೇಂದ್ರವಾಗಿಟ್ಟುಕೊಂಡು ಹಲವು ಯೋಜನೆಗಳನ್ನು ಜಾರಿಗೊಳಿಸಿರುವ ಪ್ರಧಾನಿ, ೧೪೦ ಕೋಟಿ ಭಾರತೀಯರ ಜೀವನದಲ್ಲಿ ಅಭಿವೃದ್ಧಿ, ಆತ್ಮವಿಶ್ವಾಸ ಮತ್ತು ಆತ್ಮಗೌರವ ಮೂಡಿಸಲು ಶ್ರಮಿಸಿದ್ದಾರೆ. ಮಹಿಳೆಯರ ಸುರಕ್ಷತೆ ಮತ್ತು ಘನತೆ ಹೆಚ್ಚಿಸುವಲ್ಲಿ ಶೌಚಾಲಯ ನಿರ್ಮಾಣ ಹಾಗೂ ಉಜ್ವಲ ಯೋಜನೆಗಳು ಮಹತ್ವದ ಪಾತ್ರ ವಹಿಸಿವೆ ಎಂದು ತಿಳಿಸಿದರು.

<><><>

ಸಾರ್ವಜನಿಕ ಸೇವೆಯಲ್ಲಿ ೨೫ ವರ್ಷಗಳನ್ನು ಪೂರೈಸಿರುವ ಪ್ರಧಾನಿ ನರೇಂದ್ರ ಮೋದಿ ಅವರಿಗೆ ದೇಶ-ವಿದೇಶಗಳಿಂದ ಅಭಿನಂದನಾ ಸಂದೇಶಗಳು ಹರಿದುಬರುತ್ತಿವೆ. ಬೆಲ್ಜಿಯಂ ಪ್ರಧಾನಿ ಬಾರ್ಟ್ ಡೇ ವೀವರ್, ಪ್ರಧಾನಿ ನರೇಂದ್ರ ಮೋದಿ ಅವರನ್ನು ಅಭಿನಂದಿಸಿದ್ದು, ತಮ್ಮ ಭಾರತ ಭೇಟಿಯ ಬಳಿಕ, ಉಭಯ ರಾಷ್ಟ್ರಗಳ ನಡುವಿನ ಪಾಲುದಾರಿಕೆಯನ್ನು ಮತ್ತಷ್ಟು ಬಲಗೊಳಿಸುವ ಬಗ್ಗೆ ಎದುರು ನೋಡುತ್ತಿರುವುದಾಗಿ ತಿಳಿಸಿದ್ದಾರೆ. ೨೫ ವರ್ಷಗಳ ಸಾರ್ವಜನಿಕ ಸೇವೆಯ ಸಾಧನೆಯನ್ನು ಶ್ಲಾಘಿಸಿರುವ ಕೇಂದ್ರ ಗೃಹ ಸಚಿವ ಅಮಿತ್, ಈ ಸಂದರ್ಭವನ್ನು ಐತಿಹಾಸಿಕ ಎಂದು ಬಣ್ಣಿಸಿದ್ದಾರೆ. ಹರಿಯಾಣದ ಗುರುಗ್ರಾಮ್‌ನಲ್ಲಿ ವಿಕಸಿತ ಭಾರತ ಸಂಕಲ್ಪ ಸಭಾ- ಸೇವಾ ಜ್ಯೋತಿ ಯಾತ್ರೆಯನ್ನುದ್ದೇಶಿಸಿ ಮಾತನಾಡಿದ ಸಚಿವರು, ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಡಿ ಸಂವಿಧಾನದ ೩೭೦ನೇ ವಿಧಿ ರದ್ದತಿ, ನಕ್ಸಲ್ ವಾದದ ನಿರ್ಮೂಲನೆ ಮತ್ತು ಭಾರತದ ಮೂಲ ಸೌಕರ್ಯದ ಅಭಿವೃದ್ಧಿ ಸೇರಿದಂತೆ ಹಲವು ಪ್ರಮುಖ ಅಭಿವೃದ್ಧಿ ಕಾರ್ಯಗಳನ್ನು ಸಾಧಿಸಲಾಗಿದೆ ಎಂದು ತಿಳಿಸಿದರು. ಪ್ರಧಾನಿ ಅವರನ್ನು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ ಅಭಿನಂದಿಸಿದ್ದಾರೆ. ಮಿತ್ರಪಕ್ಷಗಳ ಹಾಗೂ ಪಾಲುದಾರರೊಂದಿಗೆ, ವಿಶ್ವಾಸ, ಪರಸ್ಪರ ಗೌರವದ ಆಧಾರದ ಮೇಲೆ ಬಾಂಧವ್ಯ ಬೆಳೆಸುವ ಪ್ರಧಾನಿ, ಪಾಲುದಾರಿಕೆಯಲ್ಲಿ ಅಗತ್ಯವಿರುವ ಸ್ವಾತಂತ್ರ್ಯ ನೀಡುತ್ತಾರೆ ಎಂದು ಶ್ಲಾಘನೆ ವ್ಯಕ್ತಪಡಿಸಿದ್ದಾರೆ.

<><><>

ಭಾರತೀಯ ರಿಸರ್ವ್ ಬ್ಯಾಂಕ್-ಆರ್‌ಬಿಐನ ಹಣಕಾಸು ನೀತಿ ಸಮಿತಿ, ಜಾಗತಿಕ ಮಟ್ಟದ ಸವಾಲಿನ ಪರಿಸ್ಥಿತಿಯ ಹಿನ್ನೆಲೆಯಲ್ಲಿ, ರೆಪೊ ದರವನ್ನು ಶೇಕಡಾ ೦.೨೫ರಷ್ಟು ಹೆಚ್ಚಿಸಿ ಶೇಕಡಾ ೫.೫ ಕ್ಕೆ ನಿಗದಿಪಡಿಸಿದೆ. ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ಅವರ ನೇತೃತ್ವದಲ್ಲಿ

ನಡೆದ ಮೂರು ದಿನಗಳ ಹಣಕಾಸು ನೀತಿ ಸಮಿತಿ ಸಭೆಯ ಬಳಿಕ ಈ ನಿರ್ಧಾರ ಪ್ರಕಟಿಸಲಾಗಿದೆ. ಇದರೊಂದಿಗೆ ಸ್ಥಾಯಿ ಠೇವಣಿ ಸೌಲಭ್ಯ ದರವನ್ನು ಶೇಕಡಾ ೫.೨೫ಕ್ಕೆ ಹಾಗೂ ಮಾರ್ಜಿನಲ್ ಸ್ಟ್ಯಾಂಡಿಂಗ್ ಫೆಸಿಲಿಟಿ ಮತ್ತು ಬ್ಯಾಂಕ್ ದರವನ್ನು ಶೇಕಡಾ ೫.೭೫ಕ್ಕೆ ಪರಿಷ್ಕರಿಸಲಾಗಿದೆ. ಜಾಗತಿಕ ಹಣದುಬ್ಬರ ತೀವ್ರವಾಗಿ ಏರಿಕೆಯಾಗುವ ನಿರೀಕ್ಷೆಯಿದ್ದು, ಪ್ರಮುಖ ಕೇಂದ್ರೀಯ ಬ್ಯಾಂಕ್‌ಗಳು ಹಣಕಾಸು ನೀತಿಯನ್ನು ಬಿಗಿಗೊಳಿಸುವ ಸಾಧ್ಯತೆಯಿದೆ ಎಂದು ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ತಿಳಿಸಿದ್ದಾರೆ. ಪಶ್ಚಿಮ ಏಷ್ಯಾದ ಸಂಘರ್ಷದ ಹಿನ್ನೆಲೆಯಲ್ಲಿ ಕಚ್ಚಾ ತೈಲದ ಬೆಲೆ ಪ್ರತಿ ಬ್ಯಾರೆಲ್‌ಗೆ ೧೦೦ ಡಾಲರ್‌ಗಿಂತ ಹೆಚ್ಚಾಗಿರುವುದು ಸೇರಿದಂತೆ, ಹೆಚ್ಚುತ್ತಿರುವ ಹಣದುಬ್ಬರದ ಒತ್ತಡದ ನಡುವೆ ರೆಪೊ ದರ ಏರಿಕೆಯಾಗಿದೆ. ೨೦೨೩ರ ಫೆಬ್ರವರಿಯ ಬಳಿಕ ಇದೇ ಮೊದಲ ಬಾರಿಗೆ ಆರ್‌ಬಿಐ ರೆಪೊ ದರ ಹೆಚ್ಚಿಸಿದೆ. ಆಗಸ್ಟ್‌ನಲ್ಲಿ ಗ್ರಾಹಕ ಬೆಲೆ ಸೂಚ್ಯಂಕ ಆಧಾರಿತ ಹಣದುಬ್ಬರ ಶೇಕಡಾ ೪.೮೨ಕ್ಕೆ ಏರಿಕೆಯಾಗಿದ್ದು, ಜುಲೈನಲ್ಲಿ ಇದು ಶೇಕಡಾ ೪.೪೫ರಷ್ಟಿತ್ತು. ಹಣದುಬ್ಬರದ ಒತ್ತಡ ಮುಂದುವರಿದರೆ ಮುಂಬರುವ ಹಣಕಾಸು ನೀತಿ ಸಭೆಗಳಲ್ಲೂ ಬಡ್ಡಿದರ ಏರಿಕೆಯಾಗುವ ಸಾಧ್ಯತೆಯಿದೆ ಎಂದು ಅರ್ಥಶಾಸ್ತ್ರಜ್ಞರು ವಿಶ್ಲೇಷಿಸಿದ್ದಾರೆ.

<><><>

ಪಾಕಿಸ್ತಾನದಲ್ಲಿ ಭಯೋತ್ಪಾದಕ ಮೂಲಸೌಕರ್ಯದ ಮೇಲೆ ಭಾರತದ ಕ್ರಮ ಹಾಗೂ ಜಮ್ಮು - ಕಾಶ್ಮೀರದ ಕುರಿತು ಇಸ್ಲಾಮಿಕ್ ಸಹಕಾರ ಸಂಘಟನೆ ಒಐಸಿ ಹೇಳಿಕೆಗಳನ್ನು ಭಾರತದ ತಿರಸ್ಕರಿಸಿದೆ. ವಿಶ್ವಸಂಸ್ಥೆ ಸಾಮಾನ್ಯ ಸಭೆಯ ಆರನೇ ಸಮಿತಿ ಸಭೆಯಲ್ಲಿ ಮಾತನಾಡಿದ ಲೋಕಸಭಾ ಸಂಸದ ಬಿಪ್ಲಾಬ್ ಕುಮಾರ್ ದೇಬ್, ಈ ಹೇಳಿಕೆಗಳನ್ನು ನೀಡುವವರಿಗೆ ಸಂತ್ರಸ್ತರು ಮತ್ತು ಅಪರಾಧಿಗಳ ನಡುವೆ ವ್ಯತ್ಯಾಸ ಗುರುತಿಸಲು ಸಾಧ್ಯವಾಗಿಲ್ಲ ಎಂದು ಟೀಕಿಸಿದ್ದಾರೆ. ಇದೇ ವೇಳೆ ಸಂಸದರು ಪಾಕಿಸ್ತಾನದಿಂದ ಹೊರಹೊಮ್ಮುವ ಗಡಿಯಾಚೆಗಿನ ಭಯೋತ್ಪಾದನೆ ವಿರುದ್ಧ ತನ್ನ ನಾಗರಿಕರನ್ನು ರಕ್ಷಿಸುವ ಹಕ್ಕು ಭಾರತಕ್ಕಿದೆ ಎಂದು ಪ್ರತಿಪಾದಿಸಿದ್ದಾರೆ. ಭಾರತಕ್ಕಾಗಿರುವ ಅನುಭವವೇ, ಭಯೋತ್ಪಾದನೆ ಒಂದು ನಿರಂತರ ಬೆದರಿಕೆಯಾಗಿದೆ ಎಂಬುದನ್ನು ಸಾರುತ್ತದೆ. ಕಳೆದ ವರ್ಷ ಏಪ್ರಿಲ್‌ನಲ್ಲಿ ೨೬ ನಾಗರಿಕರ ಸಾವಿಗೆ ಕಾರಣವಾದ ಪಹಲ್ಗಾಮ್ ಭಯೋತ್ಪಾದಕ ದಾಳಿ ಇದಕ್ಕೆ ಜ್ವಲಂತ ಉದಾಹರಣೆಯಾಗಿದೆ ಎಂದು ಉಲ್ಲೇಖಿಸಿದ್ದಾರೆ.

<><><>

'ಜನ ಸೇವೆಯಿಂದ ದೇಶ ಸೇವೆ' ಎಂಬ ಮಂತ್ರದಡಿ ಹಾಗೂ ಜನರ ಏಳಿಗೆಯ ಅಚಲ ಬದ್ಧತೆಯೊಂದಿಗೆ ಕೂಡಿರುವ ಸಾರ್ವಜನಿಕ ಸೇವೆಯ ೨೫ ವರ್ಷಗಳ ಪಯಣವನ್ನು ಪ್ರಧಾನಿ ನರೇಂದ್ರ ಮೋದಿ ಪೂರೈಸಿದ್ದಾರೆ. ಸೇವೆ ಮತ್ತು ಸುಶಾಸನದ ದೂರದೃಷ್ಟಿಯೊಂದಿಗೆ ಸರ್ಕಾರ, ೨೦೪೭ರ ವೇಳೆಗೆ 'ವಿಕಸಿತ ಭಾರತ' ಗುರಿ ಸಾಧನೆಯತ್ತ ಸಾಗುತ್ತಿದೆ. ಅದರ ಭಾಗವಾಗಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ 'ಅಯೋಧ್ಯೆ ರಾಮಮಂದಿರ: ನಾಗರಿಕತೆಯ ಜಾಗೃತಿಯ ಪುನರುತ್ಥಾನ' ಕುರಿತ ವರದಿ ಇಲ್ಲಿದೆ. ಐದು ಶತಮಾನಗಳ ಸುದೀರ್ಘ ಕಾಯುವಿಕೆಯ ನಂತರ ಅಯೋಧ್ಯೆಯ ಶ್ರೀರಾಮ ಜನ್ಮಭೂಮಿಯಲ್ಲಿ ರಾಮಮಂದಿರ ನಿರ್ಮಾಣಗೊಳ್ಳುವ ಮೂಲಕ ಕೋಟ್ಯಂತರ ಜನರ ಕನಸು ನನಸಾಗಿದೆ. ಶತಮಾನಗಳಿಂದ ಪೀಳಿಗೆಯಿಂದ ಪೀಳಿಗೆಗೆ ಹರಿದು ಬಂದ ಈ ಆಶಯ, ಸುಮಾರು ೭೦ ವರ್ಷಗಳ ಕಾಲ ನ್ಯಾಯಾಲಯದಲ್ಲಿ ಇತ್ಯರ್ಥವಾಗದೇ ಉಳಿದಿತ್ತು. ಸರ್ಕಾರ ಈ ಸೂಕ್ಷ್ಮ ವಿಷಯವನ್ನು ಅತ್ಯಂತ ಯೋಜನಾ ಬದ್ಧವಾಗಿ ನಿರ್ವಹಿಸಿ, ಸೌಹಾದಯುತ ವಾತಾವರಣ ನಿರ್ಮಿಸಿ, ಶಾಂತಿ ಕಾಪಾಡಲು ಎಲ್ಲಾ ಪಾಲುದಾರರಲ್ಲೂ ಮನವಿ ಮಾಡಿತು. ಪರಿಣಾಮವಾಗಿ ನವೆಂಬರ್ ೨೦೧೯ರಲ್ಲಿ ಸುಪ್ರೀಂಕೋರ್ಟ್ ಸರ್ವಾನುಮತದ ತೀರ್ಪು ನೀಡಿ, ರಾಮಮಂದಿರ ನಿರ್ಮಾಣಕ್ಕೆ ಜಾಗವನ್ನು ಮೀಸಲಿಟ್ಟಿತು. ದೇಶಾದ್ಯಂತ ಈ ತೀರ್ಪನ್ನು ಶಾಂತಿಯುತವಾಗಿ ಸ್ವೀಕರಿಸಲಾಯಿತು. ೨೦೨೪ರ ಜನವರಿ ೨೨ ರಂದು ಪ್ರಾಣಪ್ರತಿಷ್ಠಾಪನೆ ನೆರವೇರಿತು ಹಾಗೂ ೨೦೨೫ರ ನವೆಂಬರ್‌ನಲ್ಲಿ ಧ್ವಜಾರೋಹಣದೊಂದಿಗೆ ಮಂದಿರದ ಸಂಪೂರ್ಣ ನಿರ್ಮಾಣ ಕಾರ್ಯ ಮುಕ್ತಾಯಗೊಂಡಿತು. ೫೦೦ ವರ್ಷಗಳ ಬಳಿಕ ಅಯೋಧ್ಯೆಯ ಪವಿತ್ರ ಭೂಮಿಯಲ್ಲಿ ಭಾರತೀಯ ಸಂಸ್ಕೃತಿ ಮತ್ತು ನಾಗರಿಕತೆ ತನ್ನ ಶಾಶ್ವತ ನೆಲೆಯನ್ನು ಕಂಡುಕೊಂಡಿದೆ.

<><><><>

ಆಫ್ರಿಕಾದೊಂದಿಗೆ ಭಾರತ ಹೊಂದಿರುವ ಪಾಲುದಾರಿಕೆಯನ್ನು ಇಂದಿಗೆ ಮಾತ್ರವಲ್ಲದೆ ಮುಂದಿನ ಪೀಳಿಗೆಗೂ ನಿರ್ಮಿಸಲಾಗತ್ತಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ. ಘಾನಾದ ವಿದೇಶಾಂಗ ಸೇವಾ ಸಂಸ್ಥೆಯಲ್ಲಿ ನಡೆದ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಹಿತಾಸಕ್ತಿಗಳಲ್ಲಿ ವ್ಯತ್ಯಾಸಗಳಿದ್ದರೂ, ರಾಜತಾಂತ್ರಿಕತೆ ಸ್ಪರ್ಧೆಯನ್ನು

ಸಂಘರ್ಷವನ್ನಾಗಲು ಬಿಡದೆ, ಅದನ್ನು ನಿರ್ವಹಿಸಬೇಕು ಮತ್ತು ಸಹಕಾರವನ್ನು ಉತ್ತೇಜಿಸಬೇಕು ಎಂದು ತಿಳಿಸಿದರು.

<><><><>

ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ, ಬಿಸಿಸಿಐ, ಸ್ಮೃತಿ ಮಂಧಾನ ಅವರನ್ನು ಭಾರತ ಮಹಿಳಾ ಕ್ರಿಕೆಟ್ ತಂಡದ ನೂತನ ನಾಯಕಿಯಾಗಿ ನೇಮಕ ಮಾಡಿದೆ. ಅವರು ಭಾರತ ತಂಡದ ಪೂರ್ಣಾವಧಿ ಏಕದಿನ ಹಾಗೂ ಟಿ-೨೦ ಪಂದ್ಯಗಳ ನಾಯಕತ್ವದ ಜವಾಬ್ದಾರಿ ವಹಿಸಿಕೊಳ್ಳಲಿದ್ದಾರೆ. ಹರ್ಮನ್‌ಪ್ರೀತ್ ಕೌರ್ ಅವರು ಮೂರೂ ಮಾದರಿಗಳ ನಾಯಕಿ ಸ್ಥಾನದಿಂದ ಕೆಳಗಿಳಿದ ಬಳಿಕ ಸ್ಮೃತಿ ಮಂಧಾನ ಅವರ ನೇಮಕವಾಗಿದೆ. ಈ ನಡುವೆ, ಜಿಂಬಾಬ್ವೆ ಸರಣಿಗೆ ಭಾರತ ಮಹಿಳಾ ತಂಡವನ್ನು ಬಿಸಿಸಿಐ ಪ್ರಕಟಿಸಿದೆ. ಸ್ಮೃತಿ ಮಂದಾನ ಮೊದಲ ಬಾರಿಗೆ ಮಹಿಳಾ ತಂಡದ ಪೂರ್ಣಕಾಲಿಕ ನಾಯಕಿಯಾಗಿ ತಂಡವನ್ನು ಮುನ್ನಡೆಸಲಿದ್ದಾರೆ. ಶಫಾಲಿ ವರ್ಮಾ ಅವರನ್ನು ಉಪನಾಯಕಿಯನ್ನಾಗಿ ಆಯ್ಕೆ ಮಾಡಿದೆ. ನಿಕಿ ಪ್ರಸಾದ್ ಮತ್ತು ಜಿಂತಿಮಣಿ ಕಲಿತಾ ಅವರು ತಂಡಕ್ಕೆ ಪದಾರ್ಪಣೆ ಮಾಡಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>